# Bangalore
# Regional News
# 09.07.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಡೆಂಘಿ ಪ್ರಕರಣಗಳ ನಿಯಂತ್ರಣಕ್ಕೆ ಟಾಸ್ಕ್ ಫೋರ್ಸ್ ರಚನೆ ; ಪ್ರತಿ ಜಿಲ್ಲಾಸ್ಪತ್ರೆಯಲ್ಲಿ ವಿಶೇಷ ವಾರ್ಡ್ ಸ್ಥಾಪಿಸುವಂತೆ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಕಾರಾಗೃಹದಲ್ಲಿ ಮೊಬೈಲ್ ಫೋನ್‌ಗಳ ದುರುಪಯೋಗ ತಡೆಗಟ್ಟಲು ಹೈರೆಸ್ಯೂಲೂಷನ್ ಕ್ಯಾಮರಾ ಅಳವಡಿಕೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್

೩. ಆಡಳಿತಾತ್ಮಕ ದೃಷ್ಟಿಯಿಂದ ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆಯೆಂದು ಮರುನಾಮಕರಣಕ್ಕೆ ಮನವಿ ಸಲ್ಲಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೪. ಮುಂದಿನ ೪ ದಿನಗಳು ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಭಾರೀ ಮಳೆ ಸಾಧ್ಯತೆ - ರಾಜ್ಯದ ಇತರೆಡೆ ಸಾಧಾರಣ ಮಳೆ ನಿರೀಕ್ಷೆ

**<><*<><>*><>**

ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಡೆಂಘಿ ಪ್ರಕರಣಗಳ ನಿಯಂತ್ರಣಕ್ಕೆ ಟಾಸ್ಕ್ ಫೋರ್ಸ್ ರಚಿಸಿ, ಪರೀಕ್ಷೆಗಳ ಸಂಖ್ಯೆ ಹೆಚ್ಚಳ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಉಸ್ತುವಾರಿ ಕಾರ್ಯದರ್ಶಿಗಳ ೨ನೇ ದಿನದ ಸಭೆಯಲ್ಲಿಂದು ಮಾತನಾಡಿದ ಅವರು, ಪ್ರತೀ ಜಿಲ್ಲಾಸ್ಪತ್ರೆಯಲ್ಲಿ ಡೆಂಘಿ ಚಿಕಿತ್ಸೆಗೆ ವಿಶೇಷ ವಾರ್ಡ್ ಸ್ಥಾಪನೆಗೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ರೋಗ ನಿಯಂತ್ರಣಕ್ಕೆ ಅಗತ್ಯವಿರುವ ಅನುದಾನವನ್ನು ಕೂಡಲೇ ಬಿಡುಗಡೆ ಮಾಡುವುದಾಗಿ ತಿಳಿಸಿದರು. ಬೀದಿಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯ ನೀಡುವ ಪಿಎಂ ಸ್ವ-ನಿಧಿ ಯೋಜನೆಯಡಿ ಕೇಂದ್ರ ಸರ್ಕಾರ ನಿಗದಿಪಡಿಸಿದ ಗುರಿಗಿಂತ ಹೆಚ್ಚಿನ ಸಾಧನೆ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಪಿಎಂ ಸ್ವ-ನಿಧಿ ಯೋಜನೆಯಡಿ ಶೇಕಡ ೫೪ರಷ್ಟು ಮಹಿಳೆಯರೇ ಸಾಲಸೌಲಭ್ಯ ಪಡೆದಿದ್ದಾರೆ. ಉಡುಪಿ, ಕೊಡಗು, ಯಾದಗಿರಿ, ಚಾಮರಾಜನಗರ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ನಿಗದಿತ ಗುರಿಗಿಂತ ಹೆಚ್ಚಿನ ಸಾಧನೆಯಾಗಿದೆ ಎಂದರು. ಕಲಿಕೆ ಜೊತೆ ಕೌಶಲ್ಯ ಯೋಜನೆಯಡಿ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ, ಯುವನಿಧಿ ಯೋಜನೆಯಡಿ ಫಲಾನುಭವಿಗಳಿಗೆ ಕೈಗಾರಿಕೋದ್ಯಮದಲ್ಲಿ ಬೇಡಿಕೆಗೆ ಅನುಗುಣವಾಗಿ ತರಬೇತಿ ನೀಡಿ ಉದ್ಯೋಗಾವಕಾಶ ಒದಗಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು. ರಾಜ್ಯದಲ್ಲಿ ಅರಣ್ಯವಾಸಿಗಳಿಗೆ ಭೂಮಿಹಕ್ಕು ಖಾತರಿಪಡಿಸಲು ಮುಂದಿನ ಅಧಿವೇಶನದಲ್ಲಿ ನಿರ್ಣಯ ಕೈಗೊಳ್ಳಲಾಗುವುದು. ಇದುವರೆಗೆ ಅನುಸೂಚಿತ ಬುಡಕಟ್ಟುಗಳ ಮತ್ತು ಇತರ ಪಾರಂಪಾರಿಕ ಅರಣ್ಯವಾಸಿಗಳ ಅಧಿನಿಯಮದಡಿ ಸುಮಾರು ೨ ಲಕ್ಷದ ೯೮ ಸಾವಿರ ಅರ್ಜಿಗಳು ಸ್ವೀಕೃತಗೊಂಡಿವೆ ಎಂದು ತಿಳಿಸಿದರು. ಈ ವರ್ಷ ಜಾನುವಾರುಗಳ ವೈಜ್ಞಾನಿಕ ಗಣತಿ ಕಾರ್ಯ ಕೈಗೊಳ್ಳಲು ಉದ್ದೇಶಿಸಲಾಗಿದೆ. ರಾಜ್ಯದಲ್ಲಿ ೨.೪ ಕೋಟಿ ಲೀಟರ್ ಹಾಲು ಪ್ರತಿದಿನ ಉತ್ಪಾದನೆಯಾಗುತ್ತಿದೆ. ದೌರ್ಜನ್ಯ ತಡೆ ಸಮಿತಿ ಸಭೆಗಳನ್ನು ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ನಿಯಮಿತವಾಗಿ ನಡೆಸದಿರುವುದಕ್ಕೆ ಮುಖ್ಯಮಂತ್ರಿ ಅಸಮಾಧಾನ ವ್ಯಕ್ತಪಡಿಸಿದರು. ಸಿಂಧುತ್ವ ಪ್ರಮಾಣಪತ್ರವನ್ನು ದೌರ್ಜನ್ಯತಡೆ ಅಧಿನಿಯಮದಡಿ ದಾಖಲಾಗಿರುವ ೨೪ ಕೊಲೆ ಪ್ರಕರಣಗಳಲ್ಲಿ ಸಂತ್ರಸ್ತರ ಕುಟುಂಬದವರಿಗೆ ಅನುಕಂಪದ ಆಧಾರದಲ್ಲಿ ನೀಡಬೇಕಾಗಿರುವ ಸರ್ಕಾರಿ ನೌಕರಿಯನ್ನು ಶೀಘ್ರದಲ್ಲೇ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸರ್ಕಾರದ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಕಾನೂನು ಪಾಲಿಸದವರಿಗೆ ಶಿಕ್ಷೆ ನಿಶ್ಚಿತ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನಡೆದ ರಾಷ್ಟ್ರಪತಿ ಹಾಗೂ ಮುಖ್ಯಮಂತ್ರಿಗಳ ಪದಕ ಪ್ರದಾನ ಮತ್ತು ಸನ್ನಡತೆಯ ಖೈದಿಗಳ ಅವಧಿ ಪೂರ್ವ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು. ವಿದ್ಯಾವಂತರು, ಬಡವರು, ಶ್ರೀಮಂತರಿಗೆ ಬೇರೆ ಬೇರೆ ಕಾನೂನುಗಳನ್ನು ರೂಪಿಸಲಾಗಿಲ್ಲ. ಕಾನೂನು ಪರಿಪಾಲನೆ ಎಲ್ಲರ ಜವಾಬ್ದಾರಿಯಾಗಿದ್ದು, ಉತ್ತಮ ನಡುವಳಿಕೆಯುಳ್ಳವರನ್ನು ಸಮಾಜ ಗುರುತಿಸುತ್ತದೆ ಎಂದು ಅವರು ಹೇಳಿದರು. ಕಾರಾಗ್ರಹದಲ್ಲಿ ಮೊಬೈಲ್ ಫೋನ್‌ಗಳ ದುರುಪಯೋಗ ತಡೆಗಟ್ಟಲು ಹೈರೆಸ್ಯೂಲೂಷನ್ ಕ್ಯಾಮರ ಅಳವಡಿಸಲಾಗಿದೆ. ಈ ಮೊದಲು ಜಾಮರ್ ೮೦೦ ಮೀಟರ್ ವ್ಯಾಪ್ತಿಯವರೆಗೂ ಕಾರ್ಯನಿರ್ವಹಿಸುತ್ತಿತ್ತು. ಆದ್ದರಿಂದ ಕಾರಾಗ್ರಹದ ಕಾಂಪೌಡ್‌ವರೆಗೂ ವ್ಯಾಪಿಸಿ ಜನರಿಗೆ ತೊಂದರೆಯಾಗಿತ್ತು. ಈಗ ಇದರ ವ್ಯಾಪ್ತಿಯನ್ನು ೧೦೦ ಮೀಟರ್‌ಗೆ ಇಳಿಸಲಾಗಿದೆ ಎಂದರು. ನಟ ದರ್ಶನ್‌ಗೆ ರಾಜಾತಿಥ್ಯ ದೊರೆಯುತ್ತಿದೆ ಎಂಬ ಆರೋಪದ ಕುರಿತು ಪ್ರತಿಕ್ರಿಯಿಸಿದ ಗೃಹಸಚಿವರು ಬೇರೆ ಎಲ್ಲರಿಗೆ ಕಲ್ಪಿಸಿರುವ ವ್ಯವಸ್ಥೆಯನ್ನೇ ದರ್ಶನ್‌ಗೂ ಕಲ್ಪಿಸಲಾಗಿದೆ. ವಿಶೇಷ ಊಟೋಪಚಾರ ನೀಡಿದ ಅಥವಾ ಅಂತಹ ಇತರ ಯಾವುದೇ ಘಟನೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು. ಕೆಲವು ಅಧಿಕಾರಿಗಳು ಅಕ್ರಮಗಳಿಗೆ ಕೈಜೋಡಿಸುತ್ತಿರುವುದು ಗಮನಕ್ಕೆ ಬಂದಲ್ಲಿ ಅಂತಹವರನ್ನು ವರ್ಗಾವಣೆ ಮಾಡಲಾಗಿದೆ. ಇಲಾಖೆಯಲ್ಲಿ ಮತ್ತಷ್ಟು ಸುಧಾರಣೆ ತರಲು ಕೆಲವು ನಿಯಮಗಳನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

**<><*<><>*><>**

ಚೆನ್ನಪಟ್ಟಣ, ರಾಮನಗರ, ಮಾಗಡಿ, ಕನಕಪುರ ಮತ್ತು ಹಾರೋಹಳ್ಳಿಯನ್ನು ಒಟ್ಟುಗೂಡಿಸಿ ಬೆಂಗಳೂರು ದಕ್ಷಿಣ ಜಿಲ್ಲೆ ಮಾಡಬೇಕೆಂಬ ಮನವಿಯನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಜನಪ್ರತಿನಿಧಿಗಳ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸೌಧದಲ್ಲಿಂದು ಸಲ್ಲಿಸಿದೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆಡಳಿತಾತ್ಮಕ ದೃಷ್ಟಿಯಿಂದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯೆಂದು ಈ ಹಿಂದೆ ವಿಭಾಗ ಮಾಡಲಾಯಿತು. ಆದರೆ ರಾಮನಗರವನ್ನು ಕೇಂದ್ರಾಡಳಿತವಾಗಿ ಇಟ್ಟುಕೊಂಡು ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡುವ ಅಗತ್ಯವಿದೆ. ಈಗ ನೀಡಿರುವ ಮನವಿಯಲ್ಲಿ ಹೊಸ ಜಿಲ್ಲೆಗೆ ಪ್ರಸ್ತಾವನೆ ಇಲ್ಲ, ಬದಲಾಗಿ ೫ ತಾಲೂಕುಗಳನ್ನು ಒಳಗೊಂಡು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಲು ಪ್ರಸ್ತಾಪಿಸಲಾಗಿದೆ ಎಂದು ಹೇಳಿದರು. ವೈದ್ಯಕೀಯ ಕಾಲೇಜು ನಿರ್ಮಾಣದ ಕುರಿತು ಪ್ರತಿಕ್ರಿಯಿಸಿದ ಅವರು, ರಾಮನಗರ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ನಿರ್ಮಾಣ ತಮ್ಮ ಬೇಡಿಕೆಯಾಗಿತ್ತು. ಈ ವಿಚಾರವನ್ನು ಆಯವ್ಯಯದಲ್ಲೂ ಸೇರಿಸಲಾಗಿತ್ತು. ಆದರೆ ಸಿಬ್ಬಂದಿ ಕೊರತೆ ಹಿನ್ನಲೆ ಅನುಮತಿ ನೀಡಲಾಗಿಲ್ಲ ಎಂದು ತಿಳಿಸಿದರು.

**<><*<><>*><>**

ರಿಯಲ್ ಎಸ್ಟೇಟ್‌ನಲ್ಲಿ ಲಾಭಗಳಿಸುವ ದುರಾಸೆಗೆ ರಾಮನಗರವನ್ನು ಮರುನಾಮಕರಣ ಮಾಡಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೊರಟಿದ್ದಾರೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ ಟೀಕಿಸಿದ್ದಾರೆ. ೨೦೦೭ರಲ್ಲಿ ರಾಮನಗರವನ್ನು ಅಂದಿನ ಬಿಜೆಪಿ-ಜೆಡಿಎಸ್ ಸಮ್ಮಿಶ್ರ ಸರ್ಕಾರ ಪ್ರತ್ಯೇಕ ಜಿಲ್ಲೆಯಾಗಿ ಘೋಷಿಸಿತ್ತು. ಈಗ ತಮ್ಮ ಪಕ್ಷವನ್ನು ಸೋಲಿಸಿದ ಬಿಜೆಪಿ-ಜೆಡಿಎಸ್ ಮೈತ್ರಿ ವಿರುದ್ಧ ದ್ವೇಷವನ್ನು ಸಾಧಿಸಲು ಈ ಕ್ರಮಕ್ಕೆ ಮುಂದಾಗಿರುವ ಉಪಮುಖ್ಯಮಂತ್ರಿಗಳು ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಜನರಿಗೆ ಮೋಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

**<><*<><>*><>**

ನವದೆಹಲಿಯಲ್ಲಿಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ರಾಜ್ಯದಲ್ಲಿ ಬಾಕಿಯಿರುವ ಸಾರಿಗೆ ಹೆದ್ದಾರಿ ಯೋಜನೆಗಳನ್ನು ಶೀಘ್ರವೇ ಕಾರ್ಯಗತಗೊಳಿಸುವುದು ಹಾಗೂ ಹೊಸ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸಮಾಲೋಚನೆ ನಡೆಸಿದರು. ಮಂಡ್ಯ ನಗರದ ಹೊರವರ್ತುಲರಸ್ತೆ ಹಾಗೂ ಅಲಗೂರು ಕೆ.ಎಂ. ದೊಡ್ಡಿ ರಸ್ತೆಯನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ಯೋಜನೆ ಬಗ್ಗೆಯೂ ಚರ್ಚಿಸಲಾಯಿತು. ಪ್ರಸ್ತಾಪಿತ ವಿಷಯಗಳ ಕುರಿತು ಸಚಿವ ನಿತಿನ್ ಗಡ್ಕರಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೆಚ್.ಡಿ. ಕುಮಾರಸ್ವಾಮಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><*<><>*><>

ಪಠ್ಯೇತರ ಚಟುವಟಿಕೆಯ ರೂಪದಲ್ಲಿರುವ ರಾಷ್ಟ್ರೀಯ ಸೇವಾ ಯೋಜನೆಯು ಬಹಳಷ್ಟು ವಿಷಯಗಳನ್ನು ಕಲಿಸುತ್ತದೆ. ಅದಕ್ಕಾಗಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಸಲಹೆ ನೀಡಿದ್ದಾರೆ. ಯಾದಗಿರಿ ತಾಲ್ಲೂಕಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕುರಿತ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಈ ಯೋಜನೆಯ ಚಟುವಟಿಕೆಗಳಲ್ಲಿ ತೊಡಗಿಕೊಂಡು ಕಾಲೇಜಿನ ಆವರಣವನ್ನು ಶುಚಿಯಾಗಿಡಲು ಶ್ರಮಿಸಬೇಕು. ಗಿಡ ಮರಗಳನ್ನು ನೆಡುವುದರ ಜತೆಗೆ ಅವುಗಳನ್ನು ಸಂರಕ್ಷಿಸಬೇಕು. ಮತ್ತು ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಹೇಳಿದರು.

<><*<><>*><>

೨೦೨೪-೨೫ ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ರೈತರಿಂದ ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಇದೇ ೩೦ ಕೊನೆಯ ದಿನವಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿ ತೋಟಗಾರಿಕೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ, ಹಣ್ಣು, ತರಕಾರಿ ಮತ್ತು ಹೂ, ವೈಯಕ್ತಿಕ ಮತ್ತು ಸಮುದಾಯ ನೀರು ಸಂಗ್ರಹಣಾ ಘಟಕ, ಪಾಲಿ ಮನೆ ಘಟಕ, ಮಿನಿ ಟ್ರ್ಯಾಕ್ಟರ್, ಈರುಳ್ಳಿ ಸಂಗ್ರಹಣಾ ಘಟಕಗಳಿಗೆ ಸಹಾಯಧನ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ಇನ್ನು ಹವಾವರ್ತಮಾನ,

ಉತ್ತರಕನ್ನಡ, ದಕ್ಷಿಣಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಮುಂದಿನ ೪ ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಳಗಾವಿ, ಬೀದರ್, ಕಲಬುರಗಿ, ಗದಗ, ಹಾಸನ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಗುಡುಗುಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಬಾಗಲಕೋಟೆ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ನಗರ ಮತ್ತು ಸುತ್ತಮುತ್ತ ಸಾಮಾನ್ಯವಾಗಿ ಮೋಡಿಕವಿದ ವಾತಾವರಣವಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ನಾಳೆ ಬೆಳಗ್ಗೆ ೧೧ ಗಂಟೆಗೆ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಪ್ರಕಾಶ್ ಜಿ.ಟಿ.ನಿಟ್ಟಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೨. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿಜಯಪುರ ಜಿಲ್ಲೆಯ ರೈತರು ದ್ರಾಕ್ಷಿ ಬೆಳೆ, ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮಾ ಯೋಜನೆ ಆರ್‌ಡಬ್ಲ್ಯೂಬಿಸಿಐಎಸ್ ಅಡಿಯಲ್ಲಿ ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ತೋಟಗಾರಿಕಾ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವಿಮಾ ಯೋಜನೆಯಲ್ಲಿ ನೋಂದಾಯಿಸಿಕೊಳ್ಳಲು ಇದೇ ೧೫ ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕಾ ಇಲಾಖೆ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬಹುದಾಗಿದೆ.

೩. ಆಷಾಡ ಮಾಸದ ಶುಕ್ರವಾರ ನಡೆಯುವ ವಿಶೇಷ ಪೂಜೆಯ ಪ್ರಯುಕ್ತ ಮೈಸೂರಿನ ಚಾಮುಂಡಿ ಬೆಟ್ಟದ ಚಾಮುಂಡೇಶ್ವರಿ ದೇವಿಯ ದೇವಾಲಯಕ್ಕೆ ಭೇಟಿ ನೀಡುವ ಭಕ್ತಾದಿಗಳ ಅನುಕೂಲಕ್ಕಾಗಿ ಸೂಕ್ತ ಮೂಲಭೂತಸೌಕರ್ಯ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ತಿಳಿಸಿದ್ದಾರೆ.

೪. ಬಾಲ್ಯ ವಿವಾಹ ತಡೆಗಟ್ಟಲು ಶಿಕ್ಷಣ ಇಲಾಖೆಯ ಪಾತ್ರ ಬಹುಮುಖ್ಯವಾಗಿದ್ದು, ಶಾಲೆ ಬಿಟ್ಟ ಮಕ್ಕಳ ಬಗ್ಗೆ ನಿರಂತರ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಬೇಕು. ಬಾಲ್ಯವಿವಾಹದ ಕುರಿತಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಮೂಲಕ ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳು ತಡೆಗಟ್ಟಲು ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ. ಭೂಬಾಲನ್ ಹೇಳಿದರು.

೫. ಚಿತ್ರದುರ್ಗ ನಗರದ ಆರೋಗ್ಯ ಕೇಂದ್ರದಲ್ಲಿ ನಡೆದ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕುರಿತು ಮಾಹಿತಿ ನೀಡಿ ಮಾತನಾಡಿದ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಅಪ್ರಾಪ್ತ ಹೆಣ್ಣುಮಕ್ಕಳ ಗರ್ಭಧಾರಣೆ ನಿಯಂತ್ರಿಸಲು ಪೋಷಕರು ಮಕ್ಕಳ ಬಗ್ಗೆ ಕಾಳಜಿ ವಹಿಸಬೇಕು. ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗು ನಿಲ್ಲಿಸದಿದ್ದಲ್ಲಿ ತಾಯಿ ಮರಣ, ಶಿಶು ಮರಣ ಪ್ರಮಾಣ ಹೆಚ್ಚಾಗುತ್ತದೆ ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**